ಅಧ್ಯಕ್ಷರು: ಈಗ ಸದನವನ್ನು 3.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನದ ಕಲಾಪವು 1.56 ಕ್ಕೆ ಮುಕ್ತಾಯಗೊಂಡು ಮತ್ತೆ 3.00 ಗಂಟೆಗೆ ಸೇರಲು ನಿಶ್ಚಯಿಸಿತು.)

(ಸದನವು ಮಧ್ಯಾಹ್ನ 3.29 ಗಂಟೆಗೆ ಸಮಾವೇಶಗೊಂಡಿತು)

(ಸನ್ಮಾನ್ಯ ಸಭಾಧ್ಯಕ್ಷರು ಪೀಠವನ್ನಲಂಕರಿಸಿದರು.)

ಶ್ರೀ ಜೆ.ಸಿ.ಮಾಧುಸ್ವಾಮಿ: ಮಾನ್ಯ ಅಧ್ಯಕ್ಷರೆ, ನಾನೊಂದು privilege motion move ಮಾಡಿದ್ದೆ.

ಅಧ್ಯಕ್ಷರು: ಆಯಿತು. ಬರಲಿ. ನಂತರ, ತೆಗೆದುಕೊಳ್ಳುತ್ತೇನೆ.

2. ಶಾಸನ ರಚನೆ

ವಿಧೇಯ ಮಂಡನೆ ಅನುಮತಿ ಕೋರಿಕೆ ಹಾಗೂ ವಿಧೇಯಕವನ್ನು ಪರ್ಯಾಲೋಚಿಸುವುದು.

1. <u>ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕ, 2007 ಮಂಡನೆಗೆ ಅನುಮತಿ ಕೋರಿಕೆ</u>

ಶ್ರೀ ಬಿ.ಎಸ್.ಯಡಿಯೂರಪ್ಪ (ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, 2007ನೇ ಸಾಲಿನ ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2007ನೇ ಸಾಲಿನ ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ನೀಡುವುದು."

<u>ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.</u>

ಶ್ರೀ ಬಿ.ಎಸ್.ಯಡಿಯೂರಪ್ಪ (ಉಪ ಮುಖ್ಯಮಂತ್ರಿ ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, 2007ನೇ ಸಾಲಿನ ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ

ಅಂಗೀಕರಿಸುವುದು

ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕ, 2007 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್.ಯಡಿಯೂರಪ್ಪ (ಉಪ ಮುಖ್ಯಮಂತ್ರಿ ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, 2007ನೇ ಸಾಲಿನ ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಬಿ.ಎಸ್.ಯಡಿಯೂರಪ್ಪ (ಉಪ ಮುಖ್ಯಮಂತ್ರಿ ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, ದಿನಾಂಕ: 1.7.2007 ರಿಂದ ಸಾರಾಯಿ ನಿಷೇಧ ಮಾಡಿದ್ದರಿಂದ ಈ ಸಾರಾಯಿ ಮಾರಾಟ, ಸೀಸೆಗೆ ತುಂಬುವುದಕ್ಕಾಗಿ ಲೈಸೆನ್ಸ್‌ನ ಮಂಜೂರಾತಿ ಅಥವಾ ನವೀಕರಣದ ನಿಷೇಧದ ಅವಶ್ಯಕತೆ ಇದೆ. ಎರಡನೆಯದಾಗಿ, ಸಕಲೇಶಪುರ ಮತ್ತು ನೆಲಮಂಗಲದಲ್ಲಾದ ಸಾರಾಯಿ ದುರ್ಘಟನೆ ಹಿನ್ನಲೆಯಲ್ಲಿ ಕಲಬೆರೆಕೆ ತಡೆಯುವುದಕ್ಕ ಯಾವ್ಯಾವ ವ್ಯಕ್ತಿಗಳು ಆ ವೃತ್ತಿಯಲ್ಲಿ ತೊಡಗಿರುತ್ತಾರೋ ಅಂಥ ವ್ಯಕ್ತಿಗಳ ಮೇಲೆ ಕ್ರಮ ತೆಗೆದುಕೊಳ್ಳುವುದಕ್ಕೆ ಅವಕಾಶ ಮಾಡಿಕೊಳ್ಳುವಂಥದ್ದು. ಮೂರನೆಯದಾಗಿ, KSRTC bus ಗಳಲ್ಲಿ ಕಳ್ಳ ಸಾಗಾಣಿಕೆ ಆದಂಥ ಸಂದರ್ಭದಲ್ಲಿ ನಾವು bus ಅನ್ನೇ seize ಮಾಡುತ್ತಿದ್ದೇವೆ. ಇದರಿಂದ ಪ್ರಯಾಣಿಕರಿಗೆಲ್ಲ ತೊಂದರೆಯಾಗುತ್ತಿತ್ತು. ಕಳ್ಳಸಾಗಾಣಿಕೆಯನ್ನು ಮಾಡುತ್ತಿದ್ದರೆ ಅವರ ಮೇಲೆ case ಹಾಕುವುದು ಎಲ್ಲ ಮಾಡುತ್ತೇವೆ. ಆದರೆ, bus ಅನ್ನು seize ಮಾಡುವುದೇನಿತ್ತು, ಅದನ್ನು